**<u>ದಿನಾಂಕ 04.11.2025 ರಂದು ಪಿ.ಡಬ್ಲ್ಯೂ-1 ರವರನ್ನು ಪುನಃ ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.</u>**

<u>ಮುಂದುವರೆದ ಮುಖ್ಯ ವಿಚಾರಣೆಃ- ವಾದಿ ಪರ ಶ್ರೀಮತಿ ಎಲ್ ಎಂ ಎಸ್ ವಕೀಲರಿಂದಃ-</u>

1. ದತ್ತಕ ಪತ್ರದ ಧೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-11 ಎಂದು ಗುರುತಿಸಲಾಯಿತು.

2. ಮುಟೇಶನ್ ಆನಲೈನ್ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-12 ಎಂದು ಗುರುತಿಸಲಾಯಿತು.

3. ಆರು ಗಣಕೀಕೃತ ಮುಟೇಶನ್ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-13 ರಿಂದ ನಿಪಿ-18 ಎಂದು ಗುರುತಿಸಲಾಯಿತು.

4. ಐದು ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-19 ರಿಂದ ನಿಪಿ-23 ಎಂದು ಗುರುತಿಸಲಾಯಿತು.

5. ಎರಡು ಮರಣ ಪ್ರಮಾಣ ಪತ್ರಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-24 ಮತ್ತು ನಿಪಿ-25 ಎಂದು ಗುರುತಿಸಲಾಯಿತು.

<u>ಪಾಟೀ ಸವಾಲು: **6** ರಿಂದ **8**ನೇ ಪ್ರತಿವಾದಿಯರ ಪರ ಶ್ರೀ.ಪಿ ಜಿ ಪಿ ವಕೀಲರಿಂದ:-</u>

(6 ರಿಂದ 8ನೇ ಪ್ರತಿವಾದಿಯರ ಪರ ವಕೀಲರು ಸಾಕ್ಷಿಯ ಪಾಟೀ ಸವಾಲಿಗಾಗಿ ಕಾಲಾವಕಾಶ ಕೋರುತ್ತಾರೆ. ಆದೇಶ ಪುಟಗಳನ್ನು ಪರಿಶೀಲಿಸಿ ನೋಡಲಾಗಿ, ಸದರಿ ಪ್ರತಿವಾದಿಯರು ತಮ್ಮ ಪ್ರತಿವಾದ ಪತ್ರ ಸಲ್ಲಿಸದೇ ಇರುವುದು ಕಂಡು ಬರುತ್ತದೆ. ಆದ್ದರಿಂದ ಸಾಕ್ಷಿಯ ಪಾಟೀ ಸವಾಲಿಗಾಗಿ ಕಾಲಾವಕಾಶ ನೀಡಲು ಯಾವುದೇ ಸಕಾರಣಗಳು ಕಂಡು ಬರದೇ ಇರುವುದರಿಂದ, ಸದರಿ ವಕೀಲರ ಪ್ರಾರ್ಥನೆಯನ್ನು ತಿರಸ್ಕರಿಸಿ, ಸದರಿ ಪ್ರತಿವಾದಿಯರ ಪರ ಸಾಕ್ಷಿಯ ಪಾಟೀಸವಾಲನ್ನು ಇಲ್ಲಾ ಎಂದು ತೆಗೆದುಕೊಳ್ಳಲಾಯಿತು.)

<u>ಪಾಟೀ ಸವಾಲು: **1, 2** ಮತ್ತು **5**ನೇ ಪ್ರತಿವಾದಿಯರ ಪರ ವಕೀಲರಿಂದ:-</u>

(ಸದರಿ ಪ್ರತಿವಾದಿಯರ ಪರ ವಕೀಲರನ್ನು ಕೂಗಿಸಲಾಯಿತು, ಹಾಜರು ಇರುವುದಿಲ್ಲ, ಆದ್ದರಿಂದ ಸಾಕ್ಷಿಯ ಪಾಟೀ ಸವಾಲನ್ನು ಮುಂದೂಡಲಾಯಿತು.)

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೆ. ಸರಿ ಆದೆ.

RAJASHEKHAR
Digitally signed by RAJASHEKHAR
Date: 2025.11.04 18:09:01 +0530

ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು,
ಹಾಗೂ ಜೆ.ಎಮ್.ಎಫ್.ಸಿ. ಜಮಖಂಡಿ.